Akashvani: Bangalore
National Bulletin In Kannada
09.10.2026: 13.10hrs
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
09.10.2026: 13.10hrs
**********

**ಮುಖ್ಯಾಂಶಗಳು :**

1. ಉಪಚುನಾವಣೆ: ಪಶ್ಚಿಮ ಬಂಗಾಳ, ಅಸ್ಸಾಂನಲ್ಲಿ ಬಿಜೆಪಿ, ತಮಿಳುನಾಡಿನಲ್ಲಿ ಟಿವಿಕೆ ಮುನ್ನಡೆ, ಪುದುಚೇರಿಯಲ್ಲಿ ಆಲ್ ಇಂಡಿಯಾ ಎನ್.ಆರ್.ಕಾಂಗ್ರೆಸ್ ಅಭ್ಯರ್ಥಿಗೆ ಗೆಲುವು
2. ಸಿಂಗಾಪುರಕ್ಕೆ ಇಂದಿನಿಂದ ಮೂರು ದಿನ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅಧಿಕೃತ ಭೇಟಿ
3. ವಿಶ್ವ ಅಂಚೆ ದಿನ; ಪೈಲಟ್ ಕ್ಯಾಪ್ಟನ್ ಸ್ಮಿತ್ ಮಚ್ಚಾರ್ ಗೌರವಾರ್ಥ ಕೇರಳ ಅಂಚೆ ವೃತ್ತದಿಂದ ವಿಶೇಷ ಅಂಚೆ ಲಕೋಟೆ ಬಿಡುಗಡೆ
4. ಎಂಟು ಪ್ರಮುಖ ಕಂಪನಿಗಳಿಗೆ ಉದ್ಯೋಗ-ಆಧಾರಿತ 'ಗ್ರೀನ್ ಕಾರ್ಡ್' ಪ್ರಕ್ರಿಯೆ ಸ್ಥಗಿತ - ಅಮೆರಿಕ ಸರ್ಕಾರ ಘೋಷಣೆ
5. ಟಿ-೨೦ ಕ್ರಿಕೆಟ್: ಸರಣಿಯ ಎರಡನೇ ಪಂದ್ಯದಲ್ಲಿಂದು ಭಾರತ-ವೆಸ್ಟ್ ಇಂಡೀಸ್ ಮುಖಾಮುಖಿ

***********

ತಮಿಳುನಾಡು, ಪುದುಚೇರಿ ಮತ್ತು ಪಶ್ಚಿಮ ಬಂಗಾಳದ ಐದು ವಿಧಾನಸಭಾ ಕ್ಷೇತ್ರಗಳು ಹಾಗೂ ಅಸ್ಸಾಂನ ಒಂದು ಲೋಕಸಭಾ ಕ್ಷೇತ್ರದ ಉಪಚುನಾವಣೆಯ ಮತ ಎಣಿಕೆ ನಡೆಯುತ್ತಿದೆ. ಪ್ರಸ್ತುತ ಪಶ್ಚಿಮ ಬಂಗಾಳದ ಎರಡು ವಿಧಾನಸಭಾ ಕ್ಷೇತ್ರಗಳಲ್ಲಿ ಹಾಗೂ ಅಸ್ಸಾಂನ ಒಂದು ಲೋಕಸಭಾ ಕ್ಷೇತ್ರದಲ್ಲಿ ಬಿಜೆಪಿ ಮುನ್ನಡೆಯಲ್ಲಿದೆ. ಇದೇ ವೇಳೆ ತಮಿಳುನಾಡಿನ ಎರಡು ವಿಧಾನಸಭಾ ಕ್ಷೇತ್ರಗಳಲ್ಲಿ ಆಡಳಿತರೂಢ ಟಿವಿಕೆ ಮುನ್ನಡೆಯಲ್ಲಿದೆ. ಪುದುಚೇರಿಯ ತಟ್ಟಂಚಾವಡಿ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯ ಮತ ಎಣಿಕೆ ಪೂರ್ಣಗೊಂಡಿದೆ. ಆಲ್ ಇಂಡಿಯಾ ಎನ್.ಆರ್.ಕಾಂಗ್ರೆಸ್ ಅಭ್ಯರ್ಥಿ ಅಶೋಕ್ ಆನಂದ್ ೮ ಸಾವಿರದ ೪೮೨ ಮತಗಳ ಅಂತರದಿಂದ ಭರ್ಜರಿ ಜಯಗಳಿಸಿದ್ದಾರೆ. ಅಶೋಕ್ ಆನಂದ್ ೧೩ ಸಾವಿರದ ೩೫೮ ಮತಗಳನ್ನು ಪಡೆದರೆ, ಅವರ ನಿಕಟ ಪ್ರತಿಸ್ಪರ್ಧಿ ಹಾಗೂ ಇಂಡಿಯನ್ ನ್ಯಾಷನಲ್ ಕಾಂಗ್ರೆಸ್ ಅಭ್ಯರ್ಥಿ ಇ. ವಿನಾಯಗಂ ೪ ಸಾವಿರದ ೮೭೬ ಮತಗಳನ್ನು ಪಡೆದರು. ಪುದುಚೇರಿ ಮುಖ್ಯಮಂತ್ರಿ ಎನ್.ರಂಗಸ್ವಾಮಿ ಅವರ ರಾಜೀನಾಮೆಯಿಂದ ಈ ಸ್ಥಾನಕ್ಕೆ ಚುನಾವಣೆ ನಡೆದಿತ್ತು.

***********

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಇಂದಿನಿಂದ ಮೂರು ದಿನಗಳ ಅಧಿಕೃತ ಭೇಟಿಗಾಗಿ ಸಿಂಗಾಪುರಕ್ಕೆ ತೆರಳಿದ್ದಾರೆ. ಈ ಸಂದರ್ಭದಲ್ಲಿ ಅವರು, ಸಿಂಗಾಪುರ ಅಧ್ಯಕ್ಷ ಥರ್ಮನ್ ಷಣ್ಮುಗರತ್ನಂ, ಪ್ರಧಾನಿ ಲಾರೆನ್ಸ್ ವಾಂಗ್, ಉಪ ಪ್ರಧಾನಿ ಗ್ಯಾನ್ ಕಿಮ್ ಯೋಂಗ್ ಹಾಗೂ ವಿದೇಶಾಂಗ ಸಚಿವ ವಿವಿಯನ್ ಬಾಲಕೃಷ್ಣನ್ ಅವರನ್ನು ಭೇಟಿ ಮಾಡಲಿದ್ದಾರೆ. ಭಾರತ-ಸಿಂಗಾಪುರ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯನ್ನು ಬಲಪಡಿಸುವ ನಿಟ್ಟಿನಲ್ಲಿ ವ್ಯಾಪಾರ, ಹೂಡಿಕೆ, ಡಿಜಿಟಲ್ ಹಣಕಾಸು ಸಂಪರ್ಕ, ಬಂಡವಾಳ ಮಾರುಕಟ್ಟೆ, ತೆರಿಗೆ, ಅರೆವಾಹಕಗಳು, ಸುಧಾರಿತ ಉತ್ಪಾದನೆ, ಕೌಶಲ್ಯಾಭಿವೃದ್ಧಿ ಮತ್ತು ವಿಮಾನಯಾನ ಕ್ಷೇತ್ರಗಳ ಸಹಕಾರ ಕುರಿತು ಚರ್ಚೆ ನಡೆಯಲಿದೆ. ಸಿಂಗಾಪುರದ ಪ್ರಮುಖ ಹೂಡಿಕೆದಾರರು, ಹಣಕಾಸು ಸಂಸ್ಥೆಗಳು ಮತ್ತು ಉದ್ಯಮ ಮುಖಂಡರೊಂದಿಗೂ ಸಚಿವೆ ನಿರ್ಮಲಾ ಸೀತಾರಾಮನ್ ಸಭೆ ನಡೆಸಲಿದ್ದಾರೆ. ಭಾರತದ ಆರ್ಥಿಕ ಬೆಳವಣಿಗೆ, ಹೂಡಿಕೆ ಅವಕಾಶಗಳು ಹಾಗೂ ಜಾಗತಿಕ ಆರ್ಥಿಕ ಪರಿಸ್ಥಿತಿಯ ಕುರಿತು ಅವರು ಚರ್ಚಿಸಲಿದ್ದಾರೆ.

***********

'ವಿಶ್ವ ಅಂಚೆ ದಿನ; ಒಂದು ಅಂಚೆ ಜಾಲ, ಅನಂತ ಸಾಧ್ಯತೆಗಳು' ಎಂಬ ಧ್ಯೇಯದೊಂದಿಗೆ ಇಂದು ವಿಶ್ವ ಅಂಚೆ ದಿನ ಆಚರಿಸಲಾಗುತ್ತಿದೆ. ಕೇಂದ್ರ ಸಂವಹನ ಸಚಿವ ಜ್ಯೋತಿರಾದಿತ್ಯ ಸಿಂಧಿಯಾ ಅವರು ವಿಶ್ವ ಅಂಚೆ ದಿನದ ಅಂಗವಾಗಿ ದೇಶದ ಎಲ್ಲ ಅಂಚೆ ಸೇವಕರಿಗೆ ಶುಭಾಶಯ ಕೋರಿದ್ದಾರೆ. ರಾಷ್ಟ್ರದ ಸೇವೆಗೆ ಸಮರ್ಪಣಾ ಮನೋಭಾವದಿಂದ ಕಾರ್ಯನಿರ್ವಹಿಸುತ್ತಿರುವ ಅಂಚೆ ಸೇವಕರಿಗೆ ಅವರು ಕೃತಜ್ಞತೆ ಸಲ್ಲಿಸಿದ್ದಾರೆ. 'ಅಂಚೆ ಸೇವೆಯೇ ಜನಸೇವೆ' ಎಂಬುದನ್ನು ಪುನರುಚ್ಚರಿಸಿರುವ ಅವರು, ಡಿಜಿಟಲ್ ಸಂವಹನದ ಯುಗದಲ್ಲಿ

ಭಾರತೀಯ ಅಂಚೆ ಇಲಾಖೆ ಕೂಡ ಡಿಜಿಟಲ್ ಪರಿವರ್ತನೆಯನ್ನು ಅಳವಡಿಸಿಕೊಳ್ಳುತ್ತಿದ್ದು, ಜನರ ಆಶೋತ್ತರಗಳನ್ನು ಈಡೇರಿಸಲು ಶ್ರಮಿಸುತ್ತಿದೆ ಎಂದು ತಿಳಿಸಿದ್ದಾರೆ. ಭಾರತೀಯ ಅಂಚೆ ಇಲಾಖೆ ನಿಸ್ವಾರ್ಥವಾಗಿ ರಾಷ್ಟ್ರದ ಸೇವೆಯನ್ನು ಮುಂದುವರಿಸಿದೆ ಎಂದು ಸಚಿವ ಜ್ಯೋತಿರಾದಿತ್ಯ ಸಿಂಧಿಯಾ ಹೇಳಿದ್ದಾರೆ.

***********

ದುಬೈನಿಂದ ಟೆಲ್ ಅವೀವ್‌ಗೆ ತೆರಳುತ್ತಿದ್ದ ಫ್ಲೈದುಬೈ ವಿಮಾನದಲ್ಲಿದ್ದ ೧೭೪ ಜನರ ಜೀವ ಉಳಿಸಿದ ಭಾರತೀಯ ಪೈಲಟ್ ಕ್ಯಾಪ್ಟನ್ ಸ್ಮಿತ್ ಮಚ್ಚಾರ್ ಅವರನ್ನು ಗೌರವಿಸಲು ಕೇರಳ ಅಂಚೆ ವೃತ್ತ ಇಂದು ತಿರುವನಂತಪುರದಲ್ಲಿ ವಿಶೇಷ ಅಂಚೆ ಲಕೋಟೆ ಬಿಡುಗಡೆ ಮಾಡಲಿದೆ. ಕಳೆದ ತಿಂಗಳ ೩೦ರಂದು ವಿಮಾನದಲ್ಲಿ ಹಲ್ಲೆಗೊಳಗಾಗಿ ಗಂಭೀರ ಗಾಯಗೊಂಡಿದ್ದರೂ ಕ್ಯಾಪ್ಟನ್ ಮಚ್ಚಾರ್, ಕಾಕ್‌ಪಿಟ್ ಬಾಗಿಲು ತೆರೆದು ಪ್ರಯಾಣಿಕರು ಮತ್ತು ಸಿಬ್ಬಂದಿಗೆ ಒಳಬರಲು ಅವಕಾಶ ಮಾಡಿಕೊಟ್ಟರು. ಬಳಿಕ ದಾಳಿಕೋರನನ್ನು ನಿಯಂತ್ರಿಸಿ, ವಿಮಾನವನ್ನು ಸೌದಿ ಅರೇಬಿಯಾದ ತಬೂಕ್‌ಗೆ ಸುರಕ್ಷಿತವಾಗಿ ತಿರುಗಿಸುವ ಮೂಲಕ ಎಲ್ಲರ ಜೀವ ಉಳಿಸಿದ್ದರು. ಇದೇ ಕಾರ್ಯಕ್ರಮದಲ್ಲಿ ಸ್ವಚ್ಛತಾ ಕಾರ್ಮಿಕರನ್ನು ಗೌರವಿಸುವ ಉದ್ದೇಶದಿಂದ 'ಸಫಾಯಿ ಮಿತ್ರರು' ವಿಷಯದ ವಿಶೇಷ ಅಂಚೆ ಲಕೋಟೆಯನ್ನೂ ಬಿಡುಗಡೆ ಮಾಡಲಾಗುತ್ತದೆ.

***********

'ಜನ ಸೇವೆಯಿಂದ ದೇಶ ಸೇವೆ' ಎಂಬ ಮಂತ್ರದಡಿ ಹಾಗೂ ಜನರ ಏಳಿಗೆಯ ಅಚಲ ಬದ್ಧತೆಯೊಂದಿಗೆ ಕೂಡಿರುವ ಸಾರ್ವಜನಿಕ ಸೇವೆಯ ೨೫ ವರ್ಷಗಳ ಪಯಣವನ್ನು ಪ್ರಧಾನಿ ನರೇಂದ್ರ ಮೋದಿ ಪೂರೈಸಿದ್ದಾರೆ. ಸೇವೆ ಮತ್ತು ಸುಶಾಸನದ ದೂರದೃಷ್ಟಿಯೊಂದಿಗೆ ಸರ್ಕಾರ, ೨೦೪೭ರ ವೇಳೆಗೆ 'ವಿಕಸಿತ ಭಾರತ' ಗುರಿ ಸಾಧನೆಯತ್ತ ಸಾಗುತ್ತಿದೆ. ಅದರ ಭಾಗವಾಗಿ, ಹಲವು ವಲಯಗಳಲ್ಲಿ ಕೈಗೊಂಡ ಮಹತ್ವದ ಸುಧಾರಣೆಗಳ ಕುರಿತ ಸರಣಿಯನ್ನು ಆಕಾಶವಾಣಿ ಪ್ರಸಾರ ಮಾಡುತ್ತಿದೆ. ಇಂದಿನ ಆವೃತ್ತಿಯಲ್ಲಿ 'ತ್ರಿವಳಿ ತಲಾಖ್' ಕುರಿತ ಒಂದು ವರದಿ ಇಲ್ಲಿದೆ. ಈ ಹಿಂದೆ ಭಾರತದಲ್ಲಿ ಒಂದೇ ಪದವನ್ನು ಮೂರು ಬಾರಿ ಉಚ್ಚರಿಸುವ ಮೂಲಕ, ಸೂಚನೆ ಇಲ್ಲದೆ, ಕಾರಣವಿಲ್ಲದೆ ಮತ್ತು ನಂತರ ಯಾವುದೇ ಮಾರ್ಗವಿಲ್ಲದೆ ಮುಸ್ಲಿಂ ಮಹಿಳೆಯಿಂದ ವಿಚ್ಛೇದನ ಪಡೆಯಬಹುದು ಎಂದಾಗಿತ್ತು. ಮುಸ್ಲಿಂ ಮಹಿಳಾ ವಿವಾಹ ಹಕ್ಕುಗಳ ರಕ್ಷಣೆ ಕಾಯ್ದೆ, ೨೦೧೯, ತ್ರಿವಳಿ ತಲಾಖ್ ಅನ್ನು ರದ್ದುಗೊಳಿಸಿತು. ಅಲ್ಲದೇ, ಮೂರು ವರ್ಷಗಳವರೆಗೆ ಜೈಲು ಶಿಕ್ಷೆ ಮತ್ತು ದಂಡವನ್ನು ವಿಧಿಸುವ ಅಪರಾಧ ಎಂದು ಘೋಷಿಸಲಾಯಿತು. ಇದು ಮಹಿಳೆಯರಿಗೆ ಜೀವನಾಧಾರ ಭತ್ಯೆ ಮತ್ತು ಅಪ್ರಾಪ್ತ ಮಕ್ಕಳ ಪಾಲನೆಯ ಹಕ್ಕನ್ನು ನೀಡಿತು. ಸಂವಿಧಾನದ ಖಾತರಿಯು ಪ್ರತಿಯೊಬ್ಬ ಭಾರತೀಯ ಮಹಿಳೆಗೆ, ಅವಳ ನಂಬಿಕೆ ಏನೇ ಇರಲಿ, ಸಮಾನವಾಗಿ ಸೇರಿದ್ದಾಗಿದೆ ಎಂಬ ಪ್ರಧಾನಿ ನರೇಂದ್ರ ಮೋದಿಯವರ ನಿಲುವನ್ನು ಈ ಸುಧಾರಣೆಯು ಹೊಂದಿತ್ತು. ಕಾಯ್ದೆ ಜಾರಿಗೆ ಬಂದ ಒಂದು ವರ್ಷದೊಳಗೆ ವರದಿಯಾದ ಪ್ರಕರಣಗಳಲ್ಲಿ ಶೇಕಡಾ ೮೨ ರಷ್ಟು ಕುಸಿತವನ್ನು ಅಧಿಕೃತ ದತ್ತಾಂಶ ದಾಖಲಿಸಿದೆ.

***********

ಇನ್ಫೋಸಿಸ್, ಟಿಸಿಎಸ್, ವಿಪ್ರೋ ಮತ್ತು ಎಚ್‌ಸಿಎಲ್ ನಂತಹ ಭಾರತೀಯ ಸಂಸ್ಥೆಗಳು ಸೇರಿದಂತೆ ಎಂಟು ಪ್ರಮುಖ ತಂತ್ರಜ್ಞಾನ ಮತ್ತು ಹೊರಗುತ್ತಿಗೆ ಕಂಪನಿಗಳಿಗೆ ಸಂಬಂಧಿಸಿದ, ಉದ್ಯೋಗ-ಆಧಾರಿತ 'ಗ್ರೀನ್ ಕಾರ್ಡ್' ಪ್ರಕ್ರಿಯೆಯೊಂದನ್ನು ಸ್ಥಗಿತಗೊಳಿಸುವುದಾಗಿ ಅಮೆರಿಕ ಸರ್ಕಾರ ಘೋಷಿಸಿದೆ. ಈ ಕ್ರಮವು ಕಾಗ್ನಿಜಂಟ್, ಕ್ಯಾಪ್‌ಜೆಮಿನಿ, ಮೈಕ್ರೋಸಾಫ್ಟ್ ಮತ್ತು ಅಡೋಬ್ ಕಂಪನಿಗಳಿಗೂ ಅನ್ವಯಿಸುತ್ತದೆ. ಈ ಕಂಪನಿಗಳ ವಿರುದ್ಧ ನಡೆಯುತ್ತಿರುವ ಫೆಡರಲ್ ತನಿಖೆಗಳ ಹಿನ್ನೆಲೆಯಲ್ಲಿ ಈ ಸ್ಥಗಿತಗೊಳಿಸುವ ಕ್ರಮವನ್ನು ಕೈಗೊಳ್ಳಲಾಗಿದೆ ಎಂದು ಅಮೆರಿಕದ ಕಾರ್ಮಿಕ ಕಾರ್ಯದರ್ಶಿ ಕೀತ್ ಸೋಂಡರ್‌ಲಿಂಗ್ ತಿಳಿಸಿದ್ದಾರೆ.

***********

ಸೌದಿ ಅರೇಬಿಯಾದ ರಿಯಾದ್‌ನ ಕಿಂಗ್ ಖಾಲಿದ್ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ, ನಜ್ರಾನ್ ವಿಮಾನ ನಿಲ್ದಾಣ ಹಾಗೂ ಖಮೀಸ್ ಮುಶೈತ್‌ನ ವಾಯುನೆಲೆಯನ್ನು ಗುರಿಯಾಗಿಸಿಕೊಂಡು ಕ್ಷಿಪಣಿ ದಾಳಿ ನಡೆಸಿದ ಹೊಣೆಯನ್ನು ಹೌತಿ ಬಂಡುಕೋರರು ಹೊತ್ತುಕೊಂಡಿದ್ದಾರೆ. ಸೌದಿಯ ತೈಲ ಘಟಕಗಳು ಮತ್ತು ವಿಮಾನ ನಿಲ್ದಾಣಗಳ ಸಿಬ್ಬಂದಿ ದೂರವಿರುವಂತೆಯೂ ಎಚ್ಚರಿಕೆ ನೀಡಿದ್ದಾರೆ. ಇನ್ನೊಂದೆಡೆ, ರಿಯಾದ್ ಗುರಿಯಾಗಿಸಿಕೊಂಡಿದ್ದ ಒಟ್ಟು ಮೂರು ಬ್ಯಾಲಿಸ್ಟಿಕ್ ಕ್ಷಿಪಣಿಗಳನ್ನು ತನ್ನ ವಾಯು ರಕ್ಷಣಾ ವ್ಯವಸ್ಥೆ ತಡೆದು ನಾಶಪಡಿಸಿದೆ ಎಂದು ಸೌದಿ ನೇತೃತ್ವದ ಮೈತ್ರಿಕೂಟ ತಿಳಿಸಿದೆ. ದಾಳಿಗಳಿಂದ ವಿಮಾನಯಾನ ಸೇವೆಗಳಿಗೆ ಅಡಚಣೆ ಉಂಟಾಗಿದ್ದು,

ಏರ್ ಇಂಡಿಯಾ, ಇಂಡಿಗೋ ಮತ್ತು ಆಕಾಶ ಏರ್ ಸೇರಿದಂತೆ ಹಲವು ವಿಮಾನಯಾನ ಸಂಸ್ಥೆಗಳು ರಿಯಾದ್‌ಗೆ ತಮ್ಮ ವಿಮಾನಗಳ ಹಾರಾಟವನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಿವೆ. ಸೌದಿ ವಿಮಾನ ನಿಲ್ದಾಣಗಳ ಮೇಲಿನ ದಾಳಿಗಳನ್ನು ಭಾರತ, ಯುಎಇ, ಜೋರ್ಡಾನ್, ಈಜಿಪ್ಟ್, ಕುವೈತ್ ಮತ್ತು ಬಹ್ರೇನ್ ಖಂಡಿಸಿವೆ.

***********

ಪ್ರಸ್ತುತ ಪರಿಸ್ಥಿತಿಯ ಹಿನ್ನೆಲೆಯಲ್ಲಿ ಸೌದಿ ಅರೇಬಿಯಾದಲ್ಲಿರುವ ಭಾರತೀಯರು ಎಚ್ಚರಿಕೆಯಿಂದ ಇರುವಂತೆ ಹಾಗೂ ಸಾಧ್ಯವಾದಷ್ಟು ಮನೆಯೊಳಗೆ ಇರುವಂತೆ ರಿಯಾದ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿ ಸಲಹೆ ನೀಡಿದೆ. ದಾಳಿ ಘಟನೆಗಳಿಗೆ ಸಂಬಂಧಿಸಿದ ವಿಡಿಯೊಗಳು ಅಥವಾ ಸುದ್ದಿಗಳನ್ನು ಹಂಚಿಕೊಳ್ಳದಂತೆ ಅಥವಾ ಮರುಪ್ರಕಟಿಸದಂತೆ ಭಾರತೀಯರಿಗೆ ಸೂಚಿಸಲಾಗಿದೆ. ರಿಯಾದ್‌ನ ರಾಯಭಾರ ಕಚೇರಿ ಮತ್ತು ಜೆಡ್ಡಾದಲ್ಲಿರುವ ಭಾರತೀಯ ರಾಯಭಾರ ಕಚೇರಿಯ ಕಾನ್ಸುಲೇಟ್ ಸೇರಿದಂತೆ ಸೇವೆಗಳು ಎಂದಿನಂತೆ ಕಾರ್ಯನಿರ್ವಹಿಸುತ್ತಿವೆ. ಪ್ರವಾಸಿ ಭಾರತೀಯ ಸಹಾಯ ಕೇಂದ್ರದ ೨೪ ಗಂಟೆಗಳ ಉಚಿತ ಸಹಾಯವಾಣಿ ೮೦೦೨೪೭೧೨೩೪ ಮೂಲಕ ಸಂಪರ್ಕಿಸಬಹುದು ಎಂದು ಭಾರತೀಯ ರಾಯಭಾರ ಕಚೇರಿ ತಿಳಿಸಿದೆ.

***********

ಐದು ಪಂದ್ಯಗಳ ಟಿ-೨೦ ಕ್ರಿಕೆಟ್ ಅಂತಾರಾಷ್ಟ್ರೀಯ ಸರಣಿಯ ಎರಡನೇ ಪಂದ್ಯದಲ್ಲಿ ಭಾರತ ಇಂದು ರಾಂಚಿಯಲ್ಲಿ ವೆಸ್ಟ್ ಇಂಡೀಸ್ ತಂಡವನ್ನು ಎದುರಿಸಲಿದೆ. ಪಂದ್ಯ ಸಂಜೆ ೭ ಗಂಟೆಗೆ ಆರಂಭವಾಗಲಿದೆ. ಆರಂಭಿಕ ಪಂದ್ಯದಲ್ಲಿ ನಾಯಕ ಶ್ರೇಯಸ್ ಅಯ್ಯರ್ ಅವರ ಶತಕದ ನೆರವಿನಿಂದ ಗೆಲುವು ಸಾಧಿಸಿರುವ ಭಾರತ, ಸರಣಿಯಲ್ಲಿ ೧-೦ ಅಂತರದ ಮುನ್ನಡೆಯಲ್ಲಿದೆ.

***********

ಮೋಟಾರು ಅಪಘಾತ ಪರಿಹಾರಕ್ಕೆ ಸಂಬಂಧಿಸಿದ ವಿಮೆ ವಂಚನೆಗಳನ್ನು ತಡೆಗಟ್ಟಲು ಹಾಗೂ ಪರಿಹಾರ ವಿತರಣೆಯನ್ನು ತ್ವರಿತಗೊಳಿಸಲು ನಾಲ್ಕು ಡಿಜಿಟಲ್ ವೇದಿಕೆಗಳನ್ನು ನಾಲ್ಕು ವಾರಗಳೊಳಗೆ ಸಂಯೋಜಿಸುವಂತೆ ಸುಪ್ರೀಂ ಕೋರ್ಟ್, ಕೇಂದ್ರ ಸರ್ಕಾರ, ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ ನಿರ್ದೇಶನ ನೀಡಿದೆ.

*****END******